Akashvani: Bangalore
National News In Kannada
31.10.2025 : 7.35 hrs
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

*********

ಮುಖ್ಯಾಂಶಗಳು

೧. ಇಂದು ಸರ್ದಾರ್ ವಲ್ಲಭಭಾಯ್ ಪಟೇಲ್ ೧೫೦ನೇ ಜಯಂತಿ; ದೇಶಾದ್ಯಂತ ರಾಷ್ಟ್ರೀಯ ಏಕತಾ ದಿನ ಆಚರಣೆ

೨. ನವದೆಹಲಿಯಲ್ಲಿಂದು ಅಂತಾರಾಷ್ಟ್ರೀಯ ಆರ್ಯನ್ ಶೃಂಗಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗಿ

೩. ೩ನೇ ತರಗತಿಯಿಂದ ಎಲ್ಲಾ ಶಾಲೆಗಳಲ್ಲಿ ಕೃತಕ ಬುದ್ಧಿಮತ್ತೆ ಪಠ್ಯಕ್ರಮವನ್ನು ಪರಿಚಯಿಸಲು ಕೇಂದ್ರ ಸರ್ಕಾರ ನಿರ್ಧಾರ

೪. ಐಸಿಸಿ ಮಹಿಳಾ ಏಕದಿನ ವಿಶ್ವಕಪ್; ಆಸ್ಟ್ರೇಲಿಯಾ ಮಣಿಸಿ ಫೈನಲ್‌ಗೆ ಲಗ್ಗೆಯಿಟ್ಟ ಭಾರತದ ವನಿತೆಯರು

><><><><><

ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ೧೫೦ ನೇ ಜನ್ಮ ದಿನಾಚರಣೆಯಾದ ಇಂದು ದೇಶವು ಅವರಿಗೆ ಗೌರವ ಸಲ್ಲಿಸುತ್ತಿದೆ. ಈ ದಿನವನ್ನು ರಾಷ್ಟ್ರೀಯ ಏಕತಾ ದಿನ ಎಂದೂ ಆಚರಿಸಲಾಗುತ್ತದೆ, ಇದು ಸ್ವಾತಂತ್ರ್ಯದ ನಂತರ ಭಾರತವನ್ನು ಒಗ್ಗೂಡಿಸುವಲ್ಲಿ ಸರ್ದಾರ್ ಪಟೇಲ್ ವಹಿಸಿದ ಪಾತ್ರವನ್ನು ಸ್ಮರಿಸಲು ಅವಕಾಶ ಒದಗಿಸುತ್ತದೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು

ಇಂದು ಬೆಳಿಗ್ಗೆ ನವದೆಹಲಿಯ ಪಟೇಲ್ ಚೌಕ್‌ನಲ್ಲಿರುವ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಪ್ರತಿಮೆಗೆ ಪುಷ್ಪ ನಮನ ಸಲ್ಲಿಸಿದರು. ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಕೂಡ ಸರ್ದಾರ್ ಪಟೇಲ್ ಅವರ ಪ್ರತಿಮೆಗೆ ಪುಷ್ಪ ನಮನ ಸಲ್ಲಿಸಿದರು. ಪ್ರಧಾನಿ ನರೇಂದ್ರ ಮೋದಿ ಇಂದು ರಾಷ್ಟ್ರೀಯ ಏಕತಾ ದಿನದ ಆಚರಣೆಯಲ್ಲಿ ಭಾಗವಹಿಸಲಿದ್ದಾರೆ ಮತ್ತು ಸರ್ದಾರ್ ವಲ್ಲಭಭಾಯಿ ಪಟೇಲ್ ಅವರಿಗೆ ಪುಷ್ಪ ನಮನ ಸಲ್ಲಿಸಲಿದ್ದಾರೆ. ಕಾರ್ಯಕ್ರಮದ ಸಂದರ್ಭದಲ್ಲಿ ಏಕತಾ ದಿನದ ಪ್ರತಿಜ್ಞೆಯನ್ನು ಬೋಧಿಸಲಿದ್ದಾರೆ ಮತ್ತು ಏಕತಾ ಮೆರವಣಿಗೆಗೆ ಸಾಕ್ಷಿಯಾಗಲಿದ್ದಾರೆ. ಮೆರವಣಿಗೆಯಲ್ಲಿ ವಿವಿಧ ರಾಜ್ಯ ಪೊಲೀಸ್ ಪಡೆಗಳೊಂದಿಗೆ ಬಿಎಸ್‌ಎಫ್, ಸಿಆರ್‌ಪಿಎಫ್, ಸಿಐಎಸ್‌ಎಫ್, ಐಟಿಬಿಪಿ ಮತ್ತು ಎಸ್‌ಎಸ್‌ಬಿಯ ತುಕಡಿಗಳು ಪಾಲ್ಗೊಳ್ಳಲಿವೆ.  ಈ ವರ್ಷದ ಪ್ರಮುಖ ಆಕರ್ಷಣೆಗಳಲ್ಲಿ ರಾಂಪುರ್ ಹೌಂಡ್ಸ್ ಮತ್ತು ಮುಧೋಳ್ ಹೌಂಡ್ಸ್‌ನಂತಹ ಭಾರತೀಯ ತಳಿಯ ಬೇಟೆನಾಯಿಗಳನ್ನು ಒಳಗೊಂಡಿರುವ ಬಿಎಸ್‌ಎಫ್ ಕವಾಯತು, ಗುಜರಾತ್ ಪೊಲೀಸರ ಕುದುರೆ ತುಕಡಿ, ಅಸ್ಸಾಂ ಪೊಲೀಸರ ಮೋಟಾರ್‌ಸೈಕಲ್ ಡೇರ್‌ಡೆವಿಲ್ ಶೋ, ಮತ್ತು ಬಿಎಸ್‌ಎಫ್‌ನ ಒಂಟೆ ತುಕಡಿ ಮತ್ತು ಒಂಟೆ ಆರೋಹಿತವಾದ ಬ್ಯಾಂಡ್ ಸೇರಿವೆ.  ಈ ಮೆರವಣಿಗೆಯಲ್ಲಿ ಜಾರ್ಖಂಡ್‌ನಲ್ಲಿ ನಕ್ಸಲ್ ವಿರೋಧಿ ಕಾರ್ಯಾಚರಣೆಗಳು ಮತ್ತು ಜಮ್ಮು-ಕಾಶ್ಮೀರದಲ್ಲಿ ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಗಳಲ್ಲಿ ಅಸಾಧಾರಣ ಧೈರ್ಯವನ್ನು ಪ್ರದರ್ಶಿಸಿದ ಸಿಆರ್‌ಪಿಎಫ್‌ನ ಐದು ಶೌರ್ಯ ಚಕ್ರ ಪ್ರಶಸ್ತಿ ಪುರಸ್ಕೃತರು ಮತ್ತು ಬಿಎಸ್‌ಎಫ್‌ನ ಹದಿನಾರು ಶೌರ್ಯ ಪದಕ ವಿಜೇತರನ್ನು ಸನ್ಮಾನಿಸಲಾಗುವುದು. ಈ ವರ್ಷದ ರಾಷ್ಟ್ರೀಯ ಏಕತಾ ದಿನದ ಮೆರವಣಿಗೆಯಲ್ಲಿ 'ವೈವಿಧ್ಯತೆಯಲ್ಲಿ ಏಕತೆ' ಎಂಬ ವಿಷಯವನ್ನು ಚಿತ್ರಿಸುವ ಎನ್‌ಎಸ್‌ಜಿ, ಎನ್‌ಡಿಆರ್‌ಎಫ್, ಗುಜರಾತ್, ಜಮ್ಮು-ಕಾಶ್ಮೀರ, ಅಂಡಮಾನ್-ನಿಕೋಬಾರ್ ದ್ವೀಪಗಳು, ಮಣಿಪುರ, ಮಹಾರಾಷ್ಟ್ರ, ಛತ್ತೀಸ್‌ಗಢ,

ಉತ್ತರಾಖಂಡ ಮತ್ತು ಪುದುಚೇರಿಯಿಂದ ಹತ್ತು ಸ್ತಬ್ಧಚಿತ್ರಗಳನ್ನು ಪ್ರದರ್ಶಿಸಲಾಗುವುದು. ೬೦೦ ಕಲಾವಿದರನ್ನು ಒಳಗೊಂಡ ಸಾಂಸ್ಕೃತಿಕ ಕಾರ್ಯಕ್ರಮವು ಭಾರತೀಯ ಸಂಸ್ಕೃತಿಯ ಶ್ರೀಮಂತಿಕೆ ಮತ್ತು ವೈವಿಧ್ಯತೆಯನ್ನು ಪ್ರತಿನಿಧಿಸುವ ಭಾರತದ ಶಾಸ್ತ್ರೀಯ ನೃತ್ಯಗಳನ್ನು ಪ್ರದರ್ಶಿಸಲಿದೆ.

><><><><><

ಪ್ರಧಾನಿ ನರೇಂದ್ರ ಮೋದಿ ಇಂದು ಮಧ್ಯಾಹ್ನ ನವದೆಹಲಿಯ ರೋಹಿಣಿಯಲ್ಲಿ ನಡೆಯಲಿರುವ ಅಂತಾರಾಷ್ಟ್ರೀಯ ಆರ್ಯನ್ ಶೃಂಗಸಭೆ ೨೦೨೫ ರಲ್ಲಿ ಭಾಗವಹಿಸಲಿದ್ದಾರೆ. ಈ ಕಾರ್ಯಕ್ರಮವು ಮಹರ್ಷಿ ದಯಾನಂದ ಸರಸ್ವತಿಯವರ ೨೦೦ ನೇ ಜನ್ಮ ದಿನಾಚರಣೆ ಮತ್ತು ಆರ್ಯ ಸಮಾಜದ ೧೫೦ ವರ್ಷಗಳ ಸಮಾಜ ಸೇವೆಯನ್ನು ಸ್ಮರಿಸುವ ಜ್ಞಾನ ಜ್ಯೋತಿ ಉತ್ಸವದ ಪ್ರಮುಖ ಭಾಗವಾಗಿದೆ. ಈ ಸಂದರ್ಭದಲ್ಲಿ ಪ್ರಧಾನಿ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಮಹರ್ಷಿ ದಯಾನಂದರ ಸುಧಾರಣಾವಾದಿ ಆದರ್ಶಗಳ ಸಾರ್ವತ್ರಿಕ ಪ್ರಸ್ತುತತೆ ಮತ್ತು ಸಂಸ್ಥೆಯ ಜಾಗತಿಕ ಪ್ರಭಾವವನ್ನು ಪ್ರತಿಬಿಂಬಿಸುವ ಶೃಂಗಸಭೆಯು ಭಾರತ ಮತ್ತು ವಿದೇಶಗಳಲ್ಲಿರುವ ಆರ್ಯ ಸಮಾಜ ಘಟಕಗಳ ಪ್ರತಿನಿಧಿಗಳನ್ನು ಒಟ್ಟುಗೂಡಿಸುತ್ತದೆ.

><><><><><

ಭಯೋತ್ಪಾದನೆ ನಿಗ್ರಹದ ಕುರಿತಾದ ಭಾರತ-ಆಸ್ಟ್ರೇಲಿಯಾ ಜಂಟಿ ಕಾರ್ಯಕಾರಿ ಗುಂಪಿನ ಎರಡು ದಿನಗಳ ಸಭೆ ಕ್ಯಾನ್‌ಬೆರಾದಲ್ಲಿ ಪ್ರಾರಂಭವಾಯಿತು. ಈ ಸಭೆಯಲ್ಲಿ ಉಭಯ ದೇಶಗಳು, ಪ್ರಾದೇಶಿಕ ಮತ್ತು ಅಂತಾರಾಷ್ಟ್ರೀಯ ಭಯೋತ್ಪಾದನೆಯ ವ್ಯಾಪ್ತಿಯ ಕುರಿತು ಚರ್ಚಿಸಿದ್ದು, ಭಯೋತ್ಪಾದನೆ ನಿಗ್ರಹ, ಕಾನೂನು ಜಾರಿ, ನ್ಯಾಯಾಂಗ ಸಹಕಾರ ಮತ್ತು ಕಡಲ ಭದ್ರತೆಯಲ್ಲಿ ಸಹಕಾರದ ವ್ಯಾಪಕ ಶ್ರೇಣಿಯ ಕ್ಷೇತ್ರಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡಿವೆ.

ಏಪ್ರಿಲ್ ೨೨ ರಂದು ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು ಎರಡೂ ದೇಶಗಳು ಖಂಡಿಸಿವೆ. ವಿದೇಶಾಂಗ ಸಚಿವಾಲಯದ ಜಂಟಿ ಕಾರ್ಯದರ್ಶಿ ಡಾ. ವಿನೋದ್ ಬಹಾಡೆ ಮತ್ತು ಆಸ್ಟ್ರೇಲಿಯಾದ ಭಯೋತ್ಪಾದನಾ ನಿಗ್ರಹ ರಾಯಭಾರಿ ಗೆಮ್ಮಾ ಹಗ್ಗಿನ್ಸ್ ಅವರು ಸಭೆಯ ಅಧ್ಯಕ್ಷತೆ ವಹಿಸಿದ್ದರು.

><><><><><

ಎನ್‌ಡಿಎ ಇಂದು ಪಾಟ್ನಾದಲ್ಲಿ ಬಿಹಾರ ವಿಧಾನಸಭಾ ಚುನಾವಣೆ ೨೦೨೫ ರ ಚುನಾವಣಾ ಪ್ರಣಾಳಿಕೆಯನ್ನು ಬಿಡುಗಡೆ ಮಾಡಲಿದೆ. ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜಗತ್ ಪ್ರಕಾಶ್ ನಡ್ಡಾ, ಐದು ಪಕ್ಷಗಳ ಹಿರಿಯ ನಾಯಕರೊಂದಿಗೆ ಜಂಟಿಯಾಗಿ ಬೆಳಿಗ್ಗೆ ೯:೩೦ ಕ್ಕೆ ಪ್ರಣಾಳಿಕೆಯನ್ನು ಬಿಡುಗಡೆ ಮಾಡಲಿದ್ದಾರೆ. ಈ ಸಂದರ್ಭದಲ್ಲಿ ಜೆಡಿಯು ರಾಷ್ಟ್ರೀಯ ಅಧ್ಯಕ್ಷ ಮತ್ತು ಮುಖ್ಯಮಂತ್ರಿ ನಿತೀಶ್ ಕುಮಾರ್, ಬಿಜೆಪಿಯ ಬಿಹಾರ ಚುನಾವಣಾ ಉಸ್ತುವಾರಿ ಧರ್ಮೇಂದ್ರ ಪ್ರಧಾನ್, ಮತ್ತು ಇತರ ಹಿರಿಯ ನಾಯಕರು ಉಪಸ್ಥಿತರಿರಲಿದ್ದಾರೆ.

><><><><><

೩ನೇ ತರಗತಿಯಿಂದ ಎಲ್ಲಾ ಶಾಲೆಗಳಲ್ಲಿ ಕೃತಕ ಬುದ್ಧಿಮತ್ತೆಯ ಪಠ್ಯಕ್ರಮವನ್ನು ಪರಿಚಯಿಸಲಾಗುವುದು ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಸಂಕೀರ್ಣ ಸವಾಲುಗಳನ್ನು ಪರಿಹರಿಸಲು ಕೃತಕ ಬುದ್ಧಿಮತ್ತೆಯ ನೈತಿಕ ಬಳಕೆಯೆಡೆಗೆ ಈ ಉಪಕ್ರಮವು ಒಂದು ನೂತನ ಹೆಜ್ಜೆಯಾಗಿದೆ ಎಂದು ಶಿಕ್ಷಣ ಸಚಿವಾಲಯ ತಿಳಿಸಿದೆ, ಈ ಉಪಕ್ರಮ ೩ನೇ ತರಗತಿಯಿಂದ ಪ್ರಾರಂಭವಾಗುವುದರಿಂದ ಕೃತಕ ಬುದ್ಧಿಮತ್ತೆ ಮತ್ತು ಕಂಪ್ಯೂಟರ್ ಆಧಾರಿತ ಕಲಿಕೆ, ಚಿಂತನೆ ಮತ್ತು ಬೋಧನೆಯ ಪರಿಕಲ್ಪನೆಯನ್ನು ಬಲಪಡಿಸುತ್ತದೆ ಎಂದು ಸಚಿವಾಲಯ ಹೇಳಿದೆ. ಕೃತಕ ಬುದ್ಧಿಮತ್ತೆ

ಮತ್ತು ಕಂಪ್ಯೂಟರ್ ಆಧಾರಿತ ಕಲಿಕೆ ಪಠ್ಯಕ್ರಮವನ್ನು ಅಭಿವೃದ್ಧಿಪಡಿಸಲು ಕೇಂದ್ರ ಮಾಧ್ಯಮಿಕ ಶಿಕ್ಷಣ ಮಂಡಳಿ ಐಐಟಿ ಮದ್ರಾಸ್ ಪ್ರಾಧ್ಯಾಪಕ ಕಾರ್ತಿಕ್ ರಾಮನ್ ಅವರ ಅಧ್ಯಕ್ಷತೆಯಲ್ಲಿ ತಜ್ಞರ ಸಮಿತಿಯನ್ನು ರಚಿಸಿದೆ ಎಂದು ಸಚಿವಾಲಯ ತಿಳಿಸಿದೆ. ಸಿಬಿಎಸ್‌ಇ, ಎನ್‌ಸಿಇಆರ್‌ಟಿ, ಕೆವಿಎಸ್, ಎನ್‌ವಿಎಸ್ ಮತ್ತಿತರೆ ತಜ್ಞರು ಸೇರಿದಂತೆ ಹಲವು ಸಂಸ್ಥೆಗಳನ್ನು ಒಟ್ಟುಗೂಡಿಸುವ ಪಾಲುದಾರರ ಸಮಾಲೋಚನೆಯನ್ನು ನವದೆಹಲಿಯಲ್ಲಿ ನಡೆಸಲಾಯಿತು. ಸಭೆಯಲ್ಲಿ ಮಾತನಾಡಿದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಕಾರ್ಯದರ್ಶಿ ಸಂಜಯ್ ಕುಮಾರ್, ಎಐ ಶಿಕ್ಷಣವನ್ನು ನಮ್ಮ ಸುತ್ತಲಿನ ಪ್ರಪಂಚಕ್ಕೆ ಸಂಬಂಧಿಸಿದ ಮೂಲಭೂತ ಕೌಶಲ್ಯವೆಂದು ಪರಿಗಣಿಸಬೇಕು ಎಂದು ಒತ್ತಿ ಹೇಳಿದರು.

><><><><><

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಎರಡು ದಿನಗಳ ಮಲೇಷ್ಯಾ ಭೇಟಿಗಾಗಿ ನಿನ್ನೆ ಕೌಲಾಲಂಪುರಕ್ಕೆ ತಲುಪಿದ್ದು, ನಾಳೆ ನಡೆಯಲಿರುವ ೧೨ ನೇ ಆಸಿಯಾನ್ ರಕ್ಷಣಾ ಸಚಿವರ ಸಭೆ ಎಡಿಎಂಎಂ-ಪ್ಲಸ್ ನಲ್ಲಿ ಭಾಗವಹಿಸಲಿದ್ದಾರೆ. ಸುಬಾಂಗ್ ವಾಯುನೆಲೆಗೆ ಆಗಮಿಸಿದ ರಾಜನಾಥ್ ಸಿಂಗ್ ಅವರನ್ನು ಮಲೇಷ್ಯಾದ ಭಾರತದ ಹೈಕಮಿಷನರ್ ಬಿ.ಎನ್. ರೆಡ್ಡಿ ಬರಮಾಡಿಕೊಂಡರು.

><><><><><

ಮುಂಬೈನ ಡಾ. ಡಿ.ವೈ. ಪಾಟೀಲ್ ಸ್ಪೋರ್ಟ್ಸ್ ಅಕಾಡೆಮಿಯಲ್ಲಿ ಕಳೆದ ರಾತ್ರಿ ನಡೆದ ಐಸಿಸಿ ಮಹಿಳಾ ಏಕದಿನ ವಿಶ್ವಕಪ್‌ನ ಸೆಮಿಫೈನಲ್ ಪಂದ್ಯದಲ್ಲಿ ಭಾರತ ಆಸ್ಟ್ರೇಲಿಯಾವನ್ನು ೫ ವಿಕೆಟ್‌ಗಳಿಂದ ಸೋಲಿಸಿ ಫೈನಲ್‌ಗೆ ಲಗ್ಗೆ ಇಟ್ಟಿತು. ೩೩೯ ರನ್‌ಗಳ ಗುರಿಯನ್ನು ಬೆನ್ನಟ್ಟಿದ ಭಾರತ, ೫ ವಿಕೆಟ್‌ಗಳು ಮತ್ತು ೯ ಎಸೆತಗಳು ಬಾಕಿ ಇರುವಾಗಲೇ ಗುರಿಯನ್ನು ತಲುಪಿತು.

ಜೆಮಿಮಾ ರೊಡ್ರಿಗಸ್ ಅವರ ಅಜೇಯ ೧೨೭ ರನ್ ಮತ್ತು ನಾಯಕಿ ಹರ್ಮನ್ಪ್ರೀತ್ ಕೌರ್ ಅವರ ೮೯ ರನ್‌ಗಳ ನೆರವಿನಿಂದ ಭಾರತವು ಹಾಲಿ ಚಾಂಪಿಯನ್ ಆಸ್ಟ್ರೇಲಿಯಾ ದಾಖಲಿಸಿದ ಬೃಹತ್ ಮೊತ್ತವನ್ನು ಬೆನ್ನಟ್ಟಲು ಸಹಾಯವಾಯಿತು. ಭಾರತ ಪರ ಶ್ರೀ ಚರಣಿ ಮತ್ತು ದೀಪ್ತಿ ಶರ್ಮಾ ತಲಾ ೨ ವಿಕೆಟ್‌ಗಳನ್ನು ಪಡೆದರು. ಮೊದಲು ಬ್ಯಾಟಿಂಗ್ ಆಯ್ಕೆ ಮಾಡಿಕೊಂಡ ಆಸ್ಟ್ರೇಲಿಯಾ ೪೯.೫ ಓವರ್‌ಗಳಲ್ಲಿ ೩೩೮ ರನ್‌ಗಳಿಗೆ ತನ್ನೆಲ್ಲ ವಿಕೆಟ್ ಕಳೆದುಕೊಂಡಿತು. ಫೋಬೆ ಲಿಚ್‌ಫೀಲ್ಡ್ ೧೧೯ ರನ್ ಗಳಿಸಿದರೆ, ಕಿಮ್ ಗಾರ್ತ್ ಮತ್ತು ಅನ್ನಾಬೆಲ್ ಸದರ್ಲ್ಯಾಂಡ್ ತಲಾ ೨ ವಿಕೆಟ್‌ಗಳನ್ನು ಪಡೆದರು. ಭಾರತ ತಂಡದ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದ ಜೆಮಿಮಾ ರೊಡ್ರಿಗಸ್ ಅವರನ್ನು ಪಂದ್ಯಶ್ರೇಷ್ಠ ಆಟಗಾರ್ತಿ ಎಂದು ಆಯ್ಕೆ ಮಾಡಲಾಯಿತು. ಭಾನುವಾರ ನವಿ ಮುಂಬೈನ ಡಾ. ಡಿ.ವೈ. ಪಾಟೀಲ್ ಸ್ಪೋರ್ಟ್ಸ್ ಅಕಾಡೆಮಿಯಲ್ಲಿ ನಡೆಯಲಿರುವ ಫೈನಲ್ ಪಂದ್ಯದಲ್ಲಿ ಭಾರತ ತಂಡ, ದಕ್ಷಿಣ ಆಫ್ರಿಕಾವನ್ನು ಎದುರಿಸಲಿದೆ.

><><><><><

ಜರ್ಮನಿಯ ಸಾರ್ಬ್ರೂಕೆನ್‌ನಲ್ಲಿ ನಡೆದ ಹೈಲೋ ಓಪನ್ ಸೂಪರ್ ೫೦೦ ಬ್ಯಾಡ್ಮಿಂಟನ್ ಟೂರ್ನಮೆಂಟ್‌ನ ಪುರುಷರ ಸಿಂಗಲ್ಸ್‌ನಲ್ಲಿ ಭಾರತದ ಕಿರಣ್ ಜಾರ್ಜ್ ವಿಶ್ವದ ೧೩ ನೇ ಶ್ರೇಯಾಂಕಿತ ಆಟಗಾರ ಫ್ರಾನ್ಸ್‌ನ ತೋಮಾ ಜೂನಿಯರ್ ಪೊಪೊವ್ ಅವರನ್ನು ಸೋಲಿಸುವ ಮೂಲಕ ಕ್ವಾರ್ಟರ್ ಫೈನಲ್‌ಗೆ ತಲುಪಿದ್ದಾರೆ. ೭೯ ನಿಮಿಷಗಳ ರೋಮಾಂಚಕ ಪಂದ್ಯದಲ್ಲಿ ಪೊಪೊವ್ ಅವರನ್ನು ೧೮-೨೧, ೨೧-೧೮, ೨೧-೧೯ ಸೆಟ್‌ಗಳಿಂದ ಸೋಲಿಸಿದರು. ಇದಕ್ಕೂ ಮೊದಲು, ಪುರುಷರ ಸಿಂಗಲ್ಸ್ ಕ್ವಾರ್ಟರ್ ಫೈನಲ್‌ನಲ್ಲಿ ಲಕ್ಷ್ಯ ಸೇನ್ , ಎಸ್ ಸುಬ್ರಮಣಿಯನ್ ಅವರನ್ನು ೨೧-೧೪, ೨೧-೧೧ ಸೆಟ್‌ಗಳಿಂದ ಸೋಲಿಸಿದರು. ಮಹಿಳಾ ಸಿಂಗಲ್ಸ್‌ನಲ್ಲಿ, ರಕ್ಷಿತಾ

ರಮೇಶ್ ಪೂರ್ವ-ಕ್ವಾರ್ಟರ್‌ಫೈನಲ್ ಪಂದ್ಯದಲ್ಲಿ ಶ್ರೀಯಾನ್ಶಿ ವಲಿಶೆಟ್ಟಿ ಅವರನ್ನು ೧೯-೨೧, ೨೧-೮, ೨೧-೧೩ ಸೆಟ್‌ಗಳಿಂದ ಸೋಲಿಸಿ ಕ್ವಾರ್ಟರ್ ಫೈನಲ್ ತಲುಪಿದರು.

><><><><><